**Akashvani : Bangalore**
**Regional Bulletin In Kannada**
**17.05.2024 / 18.40 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**17.05.2024 / 18.40 hrs**
**<><*<><>*><>**

ಮುಖ್ಯಾಂಶಗಳು

**<><*<><>*><>**

**೧. ಮೇಲ್ಮನೆಯ ಆರು ಕ್ಷೇತ್ರಗಳಲ್ಲಿ ೧೦೦ ಕ್ಕೂ ಹೆಚ್ಚು ಅಭ್ಯರ್ಥಿಗಳು ಕಣದಲ್ಲಿ; ನಾಮಪತ್ರ ವಾಪಸ್ ಪಡೆಯಲು ಇದೇ ೨೦ ಕೊನೆಯದಿನ**

**೨. ರಾಜ್ಯದ ಹಲವು ಭಾಗಗಳಲ್ಲಿ ಪೂರ್ವ ಮುಂಗಾರು ಚುರುಕು; ರೈತ ಸಮುದಾಯಕ್ಕೆ ಗುಣಮಟ್ಟದ ಬಿತ್ತನೆ ಬೀಜ, ರಸಗೊಬ್ಬರ ಪೂರೈಕೆಗೆ ಸೂಚನೆ**

**೩. ಮುಂದಿನ ಒಂದು ವಾರ ಕಾಲ ಮಳೆ- ೧೩ ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್**

**೪. ವಿಶ್ವ ದೂರಸಂಪರ್ಕ ದಿನ; ಅಂತರ್ಜಾಲ, ಸಂವಹನ ತಂತ್ರಜ್ಞಾನ ಕುರಿತು ಜಾಗೃತಿ ಕಾರ್ಯಕ್ರಮ**

**೫. ಐಪಿಎಲ್ ಕ್ರಿಕೆಟ್; ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಾಳೆ ರಾಯಲ್ ಚಾಲೆಂಜರ್ಸ್ ಬೆಂಗಳೂರು- ಚೆನ್ನೈ ಸೂಪರ್ ಕಿಂಗ್ಸ್ ಮುಖಾಮುಖಿ**

**<><*<><>*><>**

ವಿಧಾನಪರಿಷತ್ತಿನ ಆರು ಸ್ಥಾನಗಳಿಗೆ ೧೦೩ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದು, ಇಂದು ನಾಮಪತ್ರಗಳ ಪರಿಶೀಲನೆ ನಡೆಯಿತು. ಕಾಂಗ್ರೆಸ್, ಬಿಜೆಪಿ-ಜೆಡಿಎಸ್ ಮೈತ್ರಿ ಪಕ್ಷದ ಅಭ್ಯರ್ಥಿಗಳು ಜತೆಗೆ, ದೊಡ್ಡ ಸಂಖ್ಯೆಯಲ್ಲಿ ಪಕ್ಷೇತರ ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದಾರೆ. ಕರ್ನಾಟಕ ಈಶಾನ್ಯ ಪದವೀಧರ ಕ್ಷೇತ್ರದಿಂದ ೨೪ ನಾಮಮಪತ್ರಗಳು ಸಲ್ಲಿಕೆಯಾಗಿವೆ. ಬೆಂಗಳೂರು ಪದವೀಧರ ಕ್ಷೇತ್ರದಿಂದ ೧೮ ನಾಮಪತ್ರಗಳು ಸಲ್ಲಿಕೆಯಾದರೆ, ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದಿಂದ ೧೧ ನಾಮಪತ್ರಗಳು, ಕರ್ನಾಟಕ ನೈಋತ್ಯ ಶಿಕ್ಷಕರ ಕ್ಷೇತ್ರದಿಂದ ೭ ನಾಮಪತ್ರಗಳು, ಕರ್ನಾಟಕ ನೈಋತ್ಯ ಪದವೀಧರ ಕ್ಷೇತ್ರದಿಂದ ೧೨ ಹಾಗೂ ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರದಿಂದ ೧೩ ನಾಮಪತ್ರಗಳು ನಿನ್ನೆ ಸಲ್ಲಿಕೆಯಾಗಿದ್ದವು. ಇದುವರೆಗೆ ಒಟ್ಟು ೧೦೩ ಅಭ್ಯರ್ಥಿಗಳಿಂದ ೧೫೬ ಸೆಟ್ ನಾಮಪತ್ರಗಳು ಸಲ್ಲಿಕೆಯಾಗಿವೆ. ನಾಮಪತ್ರ ಪರಿಶೀಲನೆ

ಕಾರ್ಯ ಮುಕ್ತಾಯವಾಗಿದ್ದು, ಅಂತಿಮ ಪಟ್ಟಿ ಸಂಜೆ ವೇಳೆಗೆ ಹೊರಬೀಳಲಿದೆ. ನಾಮಪತ್ರ ವಾಪಸ್ ಪಡೆಯಲು ಇದೇ ೨೦ ಕೊನೆಯ ದಿನವಾಗಿದೆ. ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದಿಂದ ವಿಧಾನಪರಿಷತ್ತಿನ ದ್ವೈವಾರ್ಷಿಕ ಚುನಾವಣೆಗೆ ಜೂನ್ ೩ ರಂದು ಮತದಾನ ನಡೆಯಲಿದೆ. ಮತದಾನದ ಸಂಬಂಧ ಚಿತ್ರದುರ್ಗ ಜಿಲ್ಲೆಯ ಮತದಾನ ಕೇಂದ್ರಗಳ ಪಟ್ಟಿಯನ್ನು ಆಗ್ನೇಯ ಶಿಕ್ಷಕರ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಪ್ರಕಟಿಸಿದರು. ಜಿಲ್ಲೆಯಲ್ಲಿ ಒಟ್ಟು ೭ ಮತದಾನ ಕೇಂದ್ರಗಳಿವೆ. ಮೊಳಕಾಲ್ಮೂರು ತಾಲೂಕಿನ ಶಿಕ್ಷಕರ ಕ್ಷೇತ್ರದಿಂದ ಮತದಾರರು ಮೊಳಕಾಲ್ಮೂರು ಪಟ್ಟಣದ ತಾಲೂಕು ಆಡಳಿತ ಕೇಂದ್ರದಲ್ಲಿ ಮತ ಚಲಾಯಿಸಬಹುದು. ಚಳ್ಳಕೆರೆ ನಗರದ ಬಿ.ಎಂ.ಜಿ.ಎಚ್.ಎಸ್ ಶಾಲೆ, ಚಿತ್ರದುರ್ಗ ನಗರದ ಬಾಲಕಿಯರು ಸರ್ಕಾರಿ ಪದವಿ ಪೂರ್ವ ಕಾಲೇಜು ಕೊಠಡಿ ೧, ಕೋಠಡಿ ೨ ರಲ್ಲಿ ಮತದಾನಕ್ಕೆ ವ್ಯವಸ್ಥೆ ಮಾಡಲಾಗಿದೆ. ಹಿರಿಯೂರು ನಗರ ತಾಲೂಕಿನ ಕಚೇರಿಯಲ್ಲಿ, ಹೊಸದುರ್ಗ ಪಟ್ಟಣ ತಾಲೂಕು ಕಚೇರಿಯ ಸಭಾಂಗಣದಲ್ಲಿ ಹೊಳಲ್ಕರೆ ಪಟ್ಟಣದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಕನ್ನಡ ಶಾಲೆಯಲ್ಲಿ ಮತಚಲಾಯಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದರು. ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಶಿಕ್ಷಕ ಮತದಾರರು ಯಾವುದೇ ಪ್ರಚಾರ ಕಾರ್ಯದಲ್ಲಿ ಭಾಗವಹಿಸುವಂತಿಲ್ಲ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ೪ ಸಾವಿರದ ೬೧೫ ಶಿಕ್ಷಕ ಮತದಾರರು ಇದ್ದಾರೆ ಎಂದು ಅವರು ಅಂಕಿ-ಅಂಶ ನೀಡಿದರು. ಆಗ್ನೇಯ ಶಿಕ್ಷಕರ ಕ್ಷೇತ್ರದ ಚಿಕ್ಕಬಳ್ಳಾಪುರ ಜಿಲ್ಲೆ ವ್ಯಾಪ್ತಿಯಲ್ಲಿ ೩ ಸಾವಿರದ ೭೭೦ ಶಿಕ್ಷಕ ಮತದಾರರಿದ್ದಾರೆ. ೮ ತಾಲೂಕುಗಳಲ್ಲಿ ತಲಾ ೧ ರಂತೆ ೮ ಮತಗಟ್ಟೆಗಳ ಜೊತೆಗೆ ಚಿಕ್ಕಬಳ್ಳಾಪುರ ಮತ್ತು ಚಿಂತಾಮಣಿ ತಾಲೂಕು ಕೇಂದ್ರಗಳಲ್ಲಿ ಹೆಚ್ಚುವರಿಯಾಗಿ ಎರಡು ಸೇರಿದಂತೆ ಹತ್ತು ಮತಗಟ್ಟೆಗಳನ್ನು ಸ್ಥಾಪಿಸಲಾಗುವುದು. ಜೂನ್ ೩ ರಂದು ಬೆಳಿಗ್ಗೆ ೮ ರಿಂದ ಸಂಜೆ ೪ ಗಂಟೆಯವರೆಗೆ ಮತದಾನ ನಡೆಯಲಿದೆ. ಜೂನ್ ೬ ರಂದು ಮತಗಳ ಎಣಿಕೆ ನಡೆದು, ಅಂದೇ ಫಲಿತಾಂಶ ಹೊರಬೀಳುವ ಸಾಧ್ಯತೆಯಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ತಿಳಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ಮುಂದಿನ ಒಂದು ವಾರ ಮುಂಗಾರು ಮಳೆ ಚುರುಕುಗೊಳ್ಳಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದಕ್ಷಿಣ ಕನ್ನಡ, ಕೊಡಗು, ಮೈಸೂರು, ಹಾಸನ, ಮಂಡ್ಯ, ತುಮಕೂರು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಣೆ ಮಾಡಿದ್ದು, ಈ ಜಿಲ್ಲೆಗಳ ಜತೆಗೆ ಬಳ್ಳಾರಿ, ದಾವಣಗೆರೆ, ಚಿತ್ರದುರ್ಗ ಜಿಲ್ಲೆಯ ಕೆಲವು ಸ್ಥಳಗಳಲ್ಲಿ ಪ್ರತಿ ಗಂಟೆಗೆ ೪೦ ರಿಂದ ೫೦ ಕಿಲೋಮೀಟರ್ ವೇಗದಲ್ಲಿ ಗಾಳಿ ಸಮೇತ ಭಾರೀ ಮಳೆ ಸಾಧ್ಯತೆ ಇದೆ ಎಂದು ಹವಾಮಾನ

ಇಲಾಖೆ ತಿಳಿಸಿದೆ. ಕರಾವಳಿ ಮತ್ತು ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಇಂದು ಮತ್ತು ನಾಳೆ ಮಳೆ ತೀವ್ರತೆ ಹೆಚ್ಚಾಗಲಿದ್ದು, ಇದೇ ೧೦ರ ವರೆಗೆ ಕೆಲವು ಜಿಲ್ಲೆಗಳಲ್ಲಿ ಗುಡುಗು ಸಹಿತ ಭಾರೀ ಮಳೆ ಬೀಳುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನಲ್ಲಿ ಮುಂದಿನ ಎರಡು ದಿನಗಳ ಕಾಲ ಮೋಡಕವಿದ ವಾತಾವರಣವಿರಲಿದ್ದು, ಸಂಜೆ ಅಥವಾ ರಾತ್ರಿವೇಳೆ ಹಗುರದಿಂದ ಭಾರೀ ಮಳೆಯಾಗುವ ನಿರೀಕ್ಷೆ ಇದೆ. ನಿನ್ನೆ ರಾತ್ರಿ ಶಿವಮೊಗ್ಗ, ದಾವಣಗೆರೆ, ಹಾಸನ ಜಿಲ್ಲೆಗಳಲ್ಲಿ ಭಾರೀ ಮಳೆಯಾಗಿದ್ದು, ಕೊಪ್ಪಳ, ಹಾವೇರಿ ಜಿಲ್ಲೆಯಲ್ಲಿಯೂ ಗುಡುಗು ಸಹಿತ ಮಳೆಯಾಗಿದೆ. ಹಾವೇರಿ ಜಿಲ್ಲೆಯಲ್ಲಿ ಸಿಡಿಲು ಬಡಿದು, ಓರ್ವ ಯುವಕ ಮೃತಪಟ್ಟಿರುವ ಬಗ್ಗೆ ವರದಿಯಾಗಿದೆ. ಶಿವಮೊಗ್ಗ, ದಾವಣಗೆರೆ, ಹಾಸನ, ಕೊಡಗು ಜಿಲ್ಲೆಗಳಲ್ಲಿ ವರ್ಷಧಾರೆ ಉತ್ತಮವಾಗಿದ್ದು, ರೈತರಲ್ಲಿ ಸಂತಸ ಉಂಟುಮಾಡಿದೆ. ಮಳೆ ಬೀಳುತ್ತಿರುವುದರಿಂದ ಕೃಷಿ ಚಟುವಟಿಕೆಗಳು ಚುರುಕು ಗೊಂಡಿರುವ ಬಗ್ಗೆ ನಮ್ಮ ಪ್ರತಿನಿಧಿಗಳು ವರದಿ ಮಾಡಿದ್ದಾರೆ. ಹಾವೇರಿ ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನ ಬೆಳೆ ಪರಿಹಾರವನ್ನು ಸರ್ಕಾರ ರೈತರ ಬ್ಯಾಂಕ್ ಖಾತೆಗಳಿಗೆ ಜಮೆ ಮಾಡಲಾಗಿದೆ. ರೈತರು ತಮ್ಮ ಬ್ಯಾಂಕ್‌ಗಳಿಗೆ ಭೇಟಿ ನೀಡಿ, ಹಣ ಪಾವತಿಯಾಗಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ರಘುನಂದನಮೂರ್ತಿ ತಿಳಿಸಿದ್ದಾರೆ. ಇದರ ಜತೆಗೆ ಎನ್‌ಡಿಆರ್‌ಎಫ್ ಮಾರ್ಗಸೂಚಿಯಂತೆ ರೈತರ ಖಾತೆಗಳಿಗೆ ತಲಾ ಎರಡು ಸಾವಿರ ರೂಪಾಯಿ ವರೆಗೆ ರಾಜ್ಯ ಸರ್ಕಾರದ ಪರಿಹಾರದ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ ಎಂದು ಅವರು ತಿಳಿಸಿದರು. ಹಾವೇರಿ ಜಿಲ್ಲಿಯಲ್ಲಿ ಒಂದು ಲಕ್ಷ ೯೮ ಸಾವಿರದ ೪೫೫ ರೈತರಿಗೆ ೯ ಹಂತದಲ್ಲಿ ೩೭ ಕೋಟಿ ೭೩ ಲಕ್ಷ ರೂಪಾಯಿ ಪರಿಹಾರದ ಮೊತ್ತವನ್ನು ಜಮೆ ಮಾಡಲಾಗಿದೆ ಎಂದು ಅವರು ಮಾಧ್ಯಮಗಳಿಗೆ ಮಾಹಿತಿ ನೀಡಿದರು. ಗದಗ ಜಿಲ್ಲೆಯಲ್ಲಿ ಕಳೆದ ಸಾಲಿನ ಹಂಗಾಮಿನಲ್ಲಿ ಬೆಳೆಹಾನಿಗೆ ಒಂದು ಲಕ್ಷದ ೨೩ ಸಾವಿರದ ೩೧೮ ರೈತ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಸರ್ಕಾರದಿಂದ ಪರಿಹಾರ ಹಣವನ್ನು ಜಮೆ ಮಾಡಲಾಗಿದೆ ಎಂದು ಗದಗ ಜಿಲ್ಲಾಧಿಕಾರಿ ಎಂ.ಎಲ್. ವೈಶಾಲಿ ತಿಳಿಸಿದ್ದಾರೆ. ರೈತರು ತಮ್ಮ ಖಾತೆಗೆ ಹಣ ಜಮೆಯಾಗಿರುವ ಬಗ್ಗೆ ಸಹಾಯವಾಣಿಯ ಮೂಲಕ ಖಚಿತಪಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

**<><*<><>*><>**

ರಾಜ್ಯದ ದಕ್ಷಿಣ ಒಳನಾಡು ಸೇರಿದಂತೆ ಹಲವೆಡೆ ಪೂರ್ವ ಮುಂಗಾರು ಮಳೆ  ಆರಂಭವಾಗಿದ್ದು, ಕೆಲವೆಡೆ ಬರಪರಿಸ್ಥಿತಿ ಹಿನ್ನೆಲೆಯಲ್ಲಿ ವಸ್ತುಸ್ಥಿತಿಯ ಬಗ್ಗೆ ಪರಾಮರ್ಶೆ ನಡೆಸಲು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಅವರ ನೇತೃತ್ವದಲ್ಲಿ ಮುಖ್ಯಮಂತ್ರಿ ಹಾಗೂ ಸಂಪುಟದ ಸಹೋದ್ಯೋಗಿಗಳ ಜೊತೆ ಸಭೆ ನಡೆಯಿತು. ಸಭೆಯನ್ನುದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ,

ಪೂರ್ವ ಮುಂಗಾರು ಆರಂಭಗೊಂಡಿದ್ದು, ರೈತ ಸಮುದಾಯಕ್ಕೆ ಅಗತ್ಯ ಗುಣಮಟ್ಟದ ಬೀಜ , ರಸಗೊಬ್ಬರವನ್ನು ಪೂರೈಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡುವಂತೆ ಮುಖ್ಯ ಕಾರ್ಯದರ್ಶಿ ಅವರಿಗೆ ಸೂಚಿಸಿದರು. ಮಹಿಳೆಯರ ಮೇಲೆ ನಡೆಯುತ್ತಿರುವ ದೌರ್ಜನ್ಯ ಪ್ರಕರಣಗಳ ಬಗ್ಗೆ ನಿಗಾ ವಹಿಸಿ, ಅವುಗಳನ್ನು ನಿಯಂತ್ರಿಸಲು ಪೊಲೀಸ್ ವ್ಯವಸ್ಥೆಯನ್ನು ಚುರುಕುಗೊಳಿಸುವಂತೆ ರಾಜ್ಯ ಸರ್ಕಾರ ಹಿರಿಯ ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಿದೆ ಎಂದು ವರದಿಯಾಗಿದೆ. ಚುನಾವಣಾ ನೀತಿ ಸಂಹಿತೆ ಹಿನ್ನೆಲೆಯಲ್ಲಿ ಸರ್ಕಾರದ ಮುಖ್ಯಕಾರ್ಯದರ್ಶಿ ರಜನೀಶ್ ಗೋಯಲ್ ಅವರ ಅಧ್ಯಕ್ಷತೆಯಲ್ಲಿ ವಿವಿಧ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು, ಇಲಾಖಾ ಮುಖ್ಯಸ್ಥರು, ಹಾಗೂ ಸಂಪುಟದ ಸಹೋದ್ಯೋಗಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು. ರಾಜ್ಯದ ೧೩ ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್ ಘೋಷಣೆ ಮಾಡಲಾಗಿದೆ ಎಂದು ಹವಾಮಾನ ಇಲಾಖೆ ವರದಿ ಮಾಡಿದೆ.

**<><*<><>*><>**

ನೈರುತ್ಯ ಮುಂಗಾರು ಕೇರಳದ ಕರಾವಳಿಯನ್ನು ಪ್ರವೇಶಿಸಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕೇರಳದಲ್ಲಿ ಇದೇ ೩೧ ರಂದು ಮುಂಗಾರು ಪ್ರವೇಶಿಸಲಿದ್ದು, ನಿಗದಿತ ಅವಧಿಗಿಂತ ನಾಲ್ಕು ದಿನಗಳ ಮೊದಲ ಕರಾವಳಿಯಲ್ಲಿ ಮಳೆ ಆರಂಭವಾಗಲಿದೆ ಎಂದು ಇಲಾಖೆ ಮಾಹಿತಿ ನೀಡಿದೆ. ಈ ಬಾರಿ ಮುಂಗಾರು ನಿಗದಿತ ವೇಳೆಗಿಂತ ಮೊದಲೇ ಪ್ರವೇಶ ಮಾಡಲಿದ್ದು, ಅಧಿಕ ಮಳೆಯಾಗಲಿದೆ ಎಂದು ತಿಳಿಸಿದೆ.

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ರೈತರಿಗಾಗಿ ೩ ಸಾವಿರದ ೪೫೪ ಕೋಟಿ ರೂಪಾಯಿ ಬರಪರಿಹಾರ ಬಿಡುಗಡೆ ಮಾಡಿದೆ. ಇದರ ಪ್ರತಿಯಾಗಿ ರಾಜ್ಯ ಸರ್ಕಾರ ತನ್ನ ಪಾಲಿನ ಹಣ ಸೇರಿಸಿ, ರೈತ ಸಮುದಾಯಕ್ಕೆ ಕೂಡಲೇ ಹಣ ಬಿಡುಗಡೆ ಮಾಡಬೇಕು ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ ಒತ್ತಾಯಿಸಿದ್ದಾರೆ. ಬೆಂಗಳೂರಿನಲ್ಲಿಂದು ಅವರು ಈ ಹೇಳಿಕೆ ನೀಡಿದ್ದಾರೆ. ರಾಜ್ಯ ಸರ್ಕಾರ ತನ್ನ ಪಾಲಿನ ಹಣವನ್ನು ಬಿಡುಗಡೆ ಮಾಡಿಲ್ಲ, ಪಿಂಚಣಿ, ಮನ್ರೇಗಾ ಹಣವನ್ನು ಕೂಲಿ ಕಾರ್ಮಿಕರಿಗೆ ಬಿಡುಗಡೆ ಮಾಡಿಲ್ಲ, ಕೂಡಲೇ ಹಣವನ್ನು ಬಿಡುಗಡೆ ಮಾಡಿ, ರೈತರ ಹಿತ ಕಾಪಾಡಬೇಕು ಎಂದು ಅವರು ಆಗ್ರಹಿಸಿದ್ದಾರೆ. ಬಿಡುಗಡೆ ಮಾಡಿರುವ ಹಣವನ್ನು ರೈತರ ಸಾಲಕ್ಕೆ ಜಮಾ ಮಾಡದೆ, ಅವರಿಗೆ ಹಣ ತಲುಪಿಸುವ ಕಾರ್ಯ ಮಾಡಲು ಜಿಲ್ಲಾಡಳಿತಕ್ಕೆ ಮುಖ್ಯಮಂತ್ರಿ ಅವರು ಸೂಚನೆ ನೀಡಬೇಕು ಎಂದು ಪ್ರತಿಪಕ್ಷದ ನಾಯಕ ಅಶೋಕ ಸರ್ಕಾರಕ್ಕೆ ಸಲಹೆ ನೀಡಿದ್ದಾರೆ. ಮುಂಗಾರು ಚುರುಕುಗೊಂಡಿದ್ದು, ರೈತರಿಗೆ

ವಿಶೇಷ ಸಹಾಯಧನ ಯೋಜನೆಯಡಿ ೫ ಸಾವಿರ ರೂಪಾಯಿ ಹಣವನ್ನು ಬಿಡುಗಡೆ ಮಾಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

**<><*<><>*><>**

ಇನ್ನು ಹವಾವರ್ತಮಾನ...

ಕರಾವಳಿ ಮತ್ತು ಉತರ ಒಳನಾಡಿನ ಹಲವು ಭಾಗಗಳಲ್ಲಿ ಹಾಗೂ ದಕ್ಷಿಣ ಒಳನಾಡಿನ ಕೆಲವೆಡೆ ಮಳೆಯಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನಲ್ಲಿ ಅತಿ ಹೆಚ್ಚು ೭ ಸೆಂಟಿ ಮೀಟರ್ ಮಳೆಯಾಗಿದೆ. ಬಾಗಮಂಡಲ, ಕಮ್ಮರಡಿ ಮತ್ತು ಕೋಣನೂರಿನಲ್ಲಿಯೂ ತಲಾ ೭ ಸೆಂಟಿ ಮೀಟರನಂತೆ ಮಳೆಯಾಗಿರುವುದಾಗಿ ಹವಾಮಾನ ಇಲಾಖೆ ಮರದಿ ಮಾಡಿದೆ. ಯಲ್ಲಾಪುರ, ಶಿಗ್ಗಾಂವಿ, ರಾಯಚೂರು, ಗೋಕಾಕ್ ೬, ಶ್ರಿಂಗೇರಿ, ಉಪ್ಪಿನಂಗಡಿ ೫, ಕುಸ್ಟಗಿ, ಬೆಳಗಾವಿ ವಿಮಾನ ನಿಲ್ದಾಣ, ರಾಯ್‌ಬಾಗ್, ಧಾರವಾಡ ಹೊರವಲಯದಲ್ಲಿ ೪ ಸೆಂಟಿ ಮೀಟರ್ ಮಳೆಯಾಗಿದೆ. ಲಿಂಗಸೂಗುರು ೪, ಅಂಕೋಲಾ, ಹಳಿಯಾಳ ೩, ತ್ಯಾಗರ್ತಿ, ಗೆರ್‌ಸೊಪ್ಪ, ಗಬ್ಬೂರು, ಮಸ್ಕಿ, ಹಿರೆಕೇರೂರು, ಹಾರಂಗಿ, ಕುಶಾಲ್‌ನಗರ, ಅರಕಲಗೂಡು, ಬಾಳೆಹೊನ್ನೂರು, ಶ್ರವಣ ಬೆಳಗುಳ, ವಿರಾಜಪೇಟೆ ತಲಾ ೩ ಸೆಂಟಿ ಮೀಟರ್ ಮಳೆಯಾಗಿದೆ.  ಮುಂದಿನ ೨೪ ಗಂಟೆಗಳಲ್ಲಿ ರಾಜ್ಯದ ಬಹುತೇಕ ಕಡೆ ಮಳೆ - ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ವರದಿ ಮಾಡಿದೆ. ಗರಿಷ್ಠ ತಾಪಮಾನ ಮುಂದಿನ ದಿನಗಳಲ್ಲಿ ೨ ರಿಂದ ೩ ಡಿಗ್ರಿ ಸೆಲ್ಸಿಯಸ್ ಕಡಿಮೆಯಾಗುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ವರದಿ ಮಾಡಿದೆ. ಬೆಂಗಳೂರು ಸುತ್ತಮುತ್ತ ಸಾಮಾನ್ಯವಾಗಿ ಮೋಡಕವಿದ ವಾತಾವರಣ, ಕೆಲವು ಪ್ರದೇಶಗಲ್ಲಿ ಸಂಜೆ ಅಥವಾ ರಾತ್ರಿ ಮಳೆ ಬೀಳುವ ಸಾಧ್ಯತೆಯಿದೆ. ಗರಿಷ್ಠ ೩೦, ಕನಿಷ್ಠ ೨೨ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗುವ ಸಂಭವ.

**<><*<><>*><>**

ಇಂದು ವಿಶ್ವ ದೂರಸಂಪರ್ಕ ದಿನ ಆಚರಿಸಲಾಗುತ್ತಿದೆ.  ಅಂತರ್ಜಾಲ ಹಾಗೂ ಇತರ ದೂರಸಂಪರ್ಕ ಮಾಹಿತಿ- ಸಂಪರ್ಕ ತಂತ್ರಜ್ಞಾನಗಳ ಬಳಕೆಯಿಂದ ಸಾಮಾಜಿಕ ಮತ್ತು ಆರ್ಥಿಕ ಪ್ರಗತಿಯ ಸಾಧ್ಯತೆಗಳ ಕುರಿತು ಜಾಗೃತಿ ಮೂಡಿಸುವ ಸಲುವಾಗಿ ಈ ದಿನ ಆಚರಿಸಲಾಗುತ್ತಿದೆ. ವಿಶ್ವಾದ್ಯಾಂತ ಡಿಜಿಟಲ್ ಕ್ಷೇತ್ರದಲ್ಲಿ ಭಾರತ, ಪ್ರಗತಿ ಸಾಧಿಸಿದೆ. ಇತ್ತೀಚಿನ ವರ್ಷಗಳಲ್ಲಿ, ಭಾರತೀಯ ಟೆಲಿಕಾಂ ವಲಯ ಮಹತ್ವದ ಬೆಳವಣಿಗೆಗಳಿಗೆ ಸಾಕ್ಷಿಯಾಗಿದೆ, ದೇಶದಲ್ಲಿ ೬ ಲಕ್ಷಕ್ಕೂ ಅಧಿಕ ಹಳ್ಳಿಗಳಲ್ಲಿ ೪ಜಿ ಸಂಪರ್ಕ ಕಲ್ಪಿಸಲಾಗಿದೆ ಹಾಗೂ ಸುಮಾರು ೪.೪ ಲಕ್ಷ ೫ಜಿ ಬೇಸ್ ಕೇಂದ್ರಗಳನ್ನು ವಿಸ್ತರಿಸಲಾಗಿದೆ.  ೧೮೬೫ರ ಮೇ ೧೭ ರಂದು ಮೊದಲ ಅಂತಾರಾಷ್ಟ್ರೀಯ

ಟೆಲಿಗ್ರಾಫ್ ಶೃಂಗ ನಡೆದಿತ್ತು. ಇದರ ಸ್ಮರಣಾರ್ಥ ಈ ದಿನವನ್ನು ವಿಶ್ವ ದೂರಸಂಪರ್ಕ ದಿನವನ್ನಾಗಿ ಘೋಷಣೆ ಮಾಡಲಾಗಿತ್ತು.

**<><*<><>*><>**

ಉಡುಪಿ ಜಿಲ್ಲೆಯಲ್ಲಿ ಡೆಂಘಿ ಮತ್ತು ಮಲೇರಿಯಾ ಪ್ರಕರಣಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಮಾನವ ಸರಪಳಿ ಹಾಗೂ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಡಾ.ಕೆ.ವಿದ್ಯಾಕುಮಾರಿ ಉಡುಪಿಯಲ್ಲಿಂದು ಚಾಲನೆ ನೀಡಿದರು. ವಿವಿಧ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳು ಅರೆ ವೈದ್ಯಕೀಯ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು ಜಾಥಾದಲ್ಲಿ ಪಾಲ್ಗೊಂಡು, ಡಿಂಘಿ ಮತ್ತು ಮಲೇರಿಯಾ ಕುರಿತು ಮುಂಜಾಗ್ರಾತಾ ಕ್ರಮ ಕೈಗೊಳ್ಳುವುದರ ಬಗ್ಗೆ ಅರಿವು ಮೂಡಿಸುವ ಬಿತ್ತಿಪತ್ರವನ್ನು ಪ್ರದರ್ಶಿಸಿದರು. ಜಿಲ್ಲಾ ಆರೋಗ್ಯ ಅಧಿಕಾರಿ ಹಾಗೂ ಇಲಾಖೆಯ ಹಿರಿಯ ಅಧಿಕಾರಿ ಉಪಸ್ಥಿತರಿದ್ದರು.

**<><*<><>*><>**

ಕಾರವಾರ ಜಿಲ್ಲೆಯಲ್ಲಿ ಹಾದುಹೋಗುತ್ತಿರುವ ನಾಲ್ಕು ಪಥದ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಗಂಗೂಬಾಯಿ ಮಾನ್‌ಕರ್ ಸೂಚನೆ ನೀಡಿದ್ದಾರೆ. ಕುಮಟಾದ ಉಪವಿಭಾಗಾಧಿಕಾರಿ ಕಚೇರಿಯಲ್ಲಿ ಹೆದ್ದಾರಿ ಪ್ರಾಧಿಕಾರಿಗಳ ಅಧಿಕಾರಿಗಳ ಜೊತೆ ಸಮಾಲೋಚನೆ ನಡೆಸಿ, ಅಧಿಕಾರಿಗಳಿಗೆ ಸೂಚನೆ ನೀಡಿದರು. ರಾಷ್ಟ್ರೀಯ ಹೆದ್ದಾರಿಯ ಹಲವು ಮಾರ್ಗಗಳಲ್ಲಿ ಅವೈಜ್ಞಾನಿಕ ಕಾಮಗಾರಿ ಹಾಗೂ ಸೂಕ್ತ ಒಳಚರಂಡಿ ವ್ಯವಸ್ಥೆ ನಿರ್ಮಿಸದೇ ಇರುವುದರಿಂದ ಕಾರವಾರದ ಹಲವು ಭಾಗಗಳಲ್ಲಿ ಮಳೆಗಾಲದಲ್ಲಿ ಸಾರ್ವಜನಿಕರ ಮನೆಗಳಿಗೆ ನೀರು ನುಗ್ಗಿ ತೊಂದರೆಯಾಗುತ್ತಿದ್ದು, ಇದಕ್ಕೆ ಸೂಕ್ತ ಪರಿಹಾರ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ನಾಲ್ಕು ಪಥದ ಹೆದ್ದಾರಿ ಕಾಮಗಾರಿಯಲ್ಲಿ ಅಪಘಾತ ಸ್ಥಳಗಳನ್ನು ಗುರುತಿಸಿ, ಸೂಕ್ತ ಸೂಚನಾ ಫಲಕಗಳನ್ನು ಅಳವಡಿಸಬೇಕು. ರಸ್ತೆಯಲ್ಲಿ ಬೀದಿ ದೀಪಗಳನ್ನು ಅಳವಡಿಸಿ, ವಾಹನಗಳ ಸಂಚಾರಕ್ಕೆ ಸುಗಮ ವ್ಯವಸ್ಥೆ ಮಾಡಬೇಕು ಎಂದು ಜಿಲ್ಲಾಧಿಕಾರಿ ಆದೇಶಿಸಿದರು. ವಾಹನಗಳಿಗೆ ಕೆಲ ಸೇತುವೆ ನಿರ್ಮಾಣ ಹಾಗೂ ಮೇಲ್ಸುತುವೆ ನಿರ್ಮಾಣ ಜೊತೆಗೆ ಬಸ್ ಶೆಲ್ಟರ್ ಕಾಮಗಾರಿ ತ್ವರಿತವಾಗಿ ಕೈಗೆತ್ತಿಕೊಂಡು ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿಕೊಡಬೇಕು ಎಂದ ಅವರು, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳ ಸಮಸ್ಯೆಗಳ ಪರಿಹಾರಕ್ಕೆ ಸಲಹೆ ನೀಡಿದರು ಎಂದು ನಮ್ಮ ಪ್ರತಿನಿಧಿ ವರದಿ ಮಾಡಿದ್ದಾರೆ. ಸಭೆಯಲ್ಲಿ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

**<><*<><>*><>**

ಕಾರವಾರ ಜಿಲ್ಲೆಯಲ್ಲಿ ಹಾದುಹೋಗುತ್ತಿರುವ ನಾಲ್ಕು ಪಥದ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಉತ್ತರ ಕನ್ನಡ ಜಿಲ್ಲಾಧಿಕಾರಿ ಗಂಗೂಬಾಯಿ ಮಾನ್‌ಕರ್ ಸೂಚನೆ ನೀಡಿದ್ದಾರೆ. ಕುಮಟಾದ ಉಪವಿಭಾಗಾಧಿಕಾರಿ ಕಚೇರಿಯಲ್ಲಿ ಹೆದ್ದಾರಿ ಪ್ರಾಧಿಕಾರಿಗಳ ಅಧಿಕಾರಿಗಳ ಜೊತೆ ಸಮಾಲೋಚನೆ ನಡೆಸಿ, ಅಧಿಕಾರಿಗಳಿಗೆ ಸೂಚನೆ ನೀಡಿದರು. ರಾಷ್ಟ್ರೀಯ ಹೆದ್ದಾರಿಯ ಹಲವು ಮಾರ್ಗಗಳಲ್ಲಿ ಅವೈಜ್ಞಾನಿಕ ಕಾಮಗಾರಿ ಹಾಗೂ ಸೂಕ್ತ ಒಳಚರಂಡಿ ವ್ಯವಸ್ಥೆ ನಿರ್ಮಿಸದೇ ಇರುವುದರಿಂದ ಕಾರವಾರದ ಹಲವು ಭಾಗಗಳಲ್ಲಿ ಮಳೆಗಾಲದಲ್ಲಿ ಸಾರ್ವಜನಿಕರ ಮನೆಗಳಿಗೆ ನೀರು ನುಗ್ಗಿ ತೊಂದರೆಯಾಗುತ್ತಿದ್ದು, ಇದಕ್ಕೆ ಸೂಕ್ತ ಪರಿಹಾರ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ನಾಲ್ಕು ಪಥದ ಹೆದ್ದಾರಿ ಕಾಮಗಾರಿಯಲ್ಲಿ ಅಪಘಾತ ಸ್ಥಳಗಳನ್ನು ಗುರುತಿಸಿ, ಸೂಕ್ತ ಸೂಚನಾ ಫಲಕಗಳನ್ನು ಅಳವಡಿಸಬೇಕು. ರಸ್ತೆಯಲ್ಲಿ ಬೀದಿ ದೀಪಗಳನ್ನು ಅಳವಡಿಸಿ, ವಾಹನಗಳ ಸಂಚಾರಕ್ಕೆ ಸುಗಮ ವ್ಯವಸ್ಥೆ ಮಾಡಬೇಕು ಎಂದು ಜಿಲ್ಲಾಧಿಕಾರಿ ಆದೇಶಿಸಿದರು. ವಾಹನಗಳಿಗೆ ಕೆಲ ಸೇತುವೆ ನಿರ್ಮಾಣ ಹಾಗೂ ಮೇಲ್ಸುತುವೆ ನಿರ್ಮಾಣ ಜೊತೆಗೆ ಬಸ್ ಶೆಲ್ಟರ್ ಕಾಮಗಾರಿ ತ್ವರಿತವಾಗಿ ಕೈಗೆತ್ತಿಕೊಂಡು ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿಕೊಡಬೇಕು ಎಂದ ಅವರು, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳ ಸಮಸ್ಯೆಗಳ ಪರಿಹಾರಕ್ಕೆ ಸಲಹೆ ನೀಡಿದರು ಎಂದು ನಮ್ಮ ಪ್ರತಿನಿಧಿ ವರದಿ ಮಾಡಿದ್ದಾರೆ.

**<><*<><>*><>**

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿಂದು ನಡೆಯುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ಲಖನೌ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ನಾಳೆ ಬೆಂಗಳೂರು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿರುವ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಈ ಪಂದ್ಯ ತೀವ್ರ ಕುತೂಹಲ ಕೆರಳಿಸಿದ್ದು, ಉಭಯ ತಂಡಗಳಿಗೂ ಮಹತ್ವದಾಗಿದೆ. ಈ ಪಂದ್ಯದಲ್ಲಿ ಜಯಗಳಿಸುವ ತಂಡದ ಪ್ಲೇಆಫ್ ಹಾದಿ ಸುಗಮವಾಗಲಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ <>*><>**